ಆ) ವಿವಿಧ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲಾಗುವುದು

1486 (2203) ಶ್ರೀ ನಿಂಗಪ್ಪ ಹೆಚ್ (ಕುಣಿಗಲ್) – ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಿಂದ ಕುಣಿಗಲ್ ಕ್ಷೇತ್ರದ ವಡಾಘಟ್ಟದವರೆಗೆ ಬಸ್ ಮಾರ್ಗವನ್ನು ಮಂಜೂರು ಮಾಡಿ ಪ್ರಯಾಣಿಕರಿಗೆ ಸೌಕರ್ಯ ಕಲ್ಪಿಸಲು ಮಾಡಿರುವ ಮನವಿ ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಸೌಕರ್ಯ ಕಲ್ಪಿಸಲಾಗುವುದು?

ಶ್ರೀ ಎನ್ ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಬಂದಿದೆ

ಆ) ಮೇ–2007

1487 (1895) ಶ್ರೀಮತಿ ಪರಿಮಳ ಕೆ ಎಸ್ (ಹನೂರು) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಹನೂರು ಪಟ್ಟಣ ಮತ್ತು ಮಾರ್ಗ ಮಧ್ಯದ ಏಳು ಹಳ್ಳಿಗಳಲ್ಲಿ ಕುಡಿಯುವ ನೀರಿನ ತೊಂದರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಕುಡಿಯುವ ನೀರಿನ ಪೂರೈಕೆ ಬಗ್ಗೆ ಪ್ರಸ್ತಾವನೆಯು ಈಗ ಯಾವ ಹಂತದಲ್ಲಿದೆ,

ಇ) ಹನೂರು ಮತ್ತು ಮಾರ್ಗ ಮಧ್ಯದ ಏಳು ಹಳ್ಳಿಗಳಿಗೆ ಕುಡಿಯುವ ನೀರಿನ ಪೂರೈಕೆಗೆ ಎಷ್ಟು ದಿನಗಳಲ್ಲಿ ಈ ಕಾಮಗಾರಿಗೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು?